**ದಿನಾಂಕ:29.02.2020ರಂದು ಬೆಳಿಗ್ಗೆ 10.30ಕ್ಕೆ ಮಾನ್ಯ ಜಿಲ್ಲಾಧಿಕಾರಿಗಳು, ಚಾಮರಾಜನಗರರವರ ಅಧ್ಯಕ್ಷತೆಯಲ್ಲಿ ನಡೆದ "ರಾಷ್ಟ್ರೀಯ ಹಸಿರು ಪಡೆ" ಇಕೋ ಕ್ಲಬ್ ಕಾರ್ಯಕ್ರಮಗಳ ಅನುಷ್ಠಾನ ಕುರಿತಾದ ಜಿಲ್ಲಾ ಅನುಷ್ಠಾನ ಮತ್ತು ಮೇಲುಸ್ತುವಾರಿ ಸಮಿತಿ ಸಭೆಯ ನಡಾವಳಿ.**

**ಜಿಲ್ಲಾ ಅನುಷ್ಠಾನ ಮತ್ತು ಮೇಲುಸ್ತುವಾರಿ ಸಮಿತಿಯ ಎಲ್ಲಾ ಸದಸ್ಯರುಗಳಿಗೆ ಸ್ವಾಗತ ಕೋರುವ ಮೂಲಕ ಸಭೆಯನ್ನು ಪ್ರಾರಂಭಿಸಲಾಯಿತು.**

- **ಇಕೋ ಕ್ಲಬ್ ಶಾಲೆಗಳ ಗುರಿ ಮತ್ತು ಉದ್ದೇಶದ ಬಗ್ಗೆ.**

ಕರ್ನಾಟಕ ರಾಜ್ಯದ 34 ಶೈಕ್ಷಣಿಕ ಜಿಲ್ಲೆಗಳಲ್ಲಿಯೂ ಎಂಪ್ರಿ ಸಂಸ್ಥೆಯವತಿಯಿಂದ ರಾಷ್ಟ್ರೀಯ ಹಸಿರುಪಡೆ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಜಿಲ್ಲೆಯಲ್ಲಿನ 501 ಸರ್ಕಾರಿ/ಅನುದಾನಿತ/ ಅನುದಾನರಹಿತ ಶಾಲೆಗಳನ್ನು ಆಯ್ಕೆ ಮಾಡಿ ಪ್ರತಿ ಶಾಲೆಗೆ ರೂ.5000/-ಗಳ ಅನುದಾನವನ್ನು ಈಗಾಗಲೇ ಬಿಡುಗಡೆ ಮಾಡಿರುವುದಾಗಿ ಎಂಪ್ರಿ ಸಂಸ್ಥೆಯ ಪ್ರತಿನಿಧಿ ಮಲ್ಲೇಶ್ ತಿಳಿಸಿದರು.

ಶಾಲೆಗಳಲ್ಲಿ ವಿದ್ಯಾರ್ಥಿಗಳ ಪಠ್ಯ ಚಟುವಟಿಕೆಗಳಿಗೆ ಪೂರಕವಾಗಿ ಶಾಲಾ ಆವರಣದಲ್ಲಿ ಗಿಡಗಳನ್ನು ಬೆಳೆಸುವುದು, ಉತ್ತಮ ಪರಿಸರ ನಿರ್ವಹಣೆ ಮಾಡಿರುವ ಶಾಲೆಗಳನ್ನು ಆಯ್ಕೆ ಮಾಡಿ ಪರಿಸರ ಮಿತ್ರ ಶಾಲೆಗಳೆಂದು ಘೋಷಣೆ ಮಾಡುವುದು, ವಿದ್ಯಾರ್ಥಿಗಳಲ್ಲಿ ಮತ್ತು ಪೋಷಕರಲ್ಲಿ ಪರಿಸರ ಜಾಗೃತಿಯನ್ನು ಮೂಡಿಸುವ ಉದ್ದೇಶವನ್ನು ಹೊಂದಲಾಗಿದೆ ಎಂದು ತಿಳಿಸಿದರು.

ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಅನುಷ್ಠಾನ ಮತ್ತು ಮೇಲುಸ್ತುವಾರಿ ಸಮಿತಿಯ ಅಧ್ಯಕ್ಷರು ಮಾತನಾಡಿ ಶಾಲೆಗಳನ್ನು ಆಯ್ಕೆ ಮಾಡುವಾಗ ಅನುಸರಿಸುವ ವಿಧಾನಗಳ ಬಗ್ಗೆ ಮಾಹಿತಿ ನೀಡುವಂತೆ ತಿಳಿಸಿದರು. ಈ ಸಂಬಂಧ ಉಪನಿರ್ದೇಶಕರು(ಆಡಳಿತ)ರವರು ಮಾತನಾಡಿ ಎಂಪ್ರಿ ಸಂಸ್ಥೆಯವರು ನೀಡಿರುವ ಮಾರ್ಗಸೂಚಿಯಂತೆ ಶಾಲಾ ಆವರಣದಲ್ಲಿ ಸ್ಥಳಾವಕಾಶವಿದ್ದು ಸುತ್ತಲೂ ಸುರಕ್ಷತೆಯ ದೃಷ್ಟಿಯಿಂದ ಕಾಂಪೌಂಡ್ ಹೊಂದಿರುವ ಶಾಲೆಗಳನ್ನು ಆಯ್ಕೆ ಮಾಡಲಾಗುವುದೆಂದು ತಿಳಿಸಿದರು.

- **ಪರಿಸರ ಮಿತ್ರ ಶಾಲೆಗಳನ್ನು ಮುಂದುವರೆಸುವ ಬಗ್ಗೆ.**

ಪರಿಸರ ಸಂರಕ್ಷಣೆ ಇಲಾಖೆಯವತಿಯಿಂದ ಶಾಲೆಗಳಲ್ಲಿ ಪರಿಸರ ಮಿತ್ರ ಶಾಲೆಗಳನ್ನು ಆಯ್ಕೆ ಮಾಡಿ ಸದರಿ ಶಾಲೆಗಳಲ್ಲಿ ಹಸಿರುಪಡೆ ಕಾರ್ಯಕ್ರಮವನ್ನು 2018-19ನೇ ಸಾಲಿನವರೆಗೆ ನಡೆಸಲಾಗುತ್ತಿತ್ತು. ಪ್ರಸ್ತುತ 2019-20ನೇ ಸಾಲಿನಲ್ಲಿ ಸ್ಥಗಿತಗೊಳಿಸಿರುವುದಾಗಿ ಉಪ ಪರಿಸರ ಅಧಿಕಾರಿಯವರು ತಿಳಿಸಿದರು. ಈ ಸಂಬಂಧ ಸಭೆಯಲ್ಲಿ ಚರ್ಚಿಸಿ ಎಂಪ್ರಿ ಸಂಸ್ಥೆಯವರು ಆಯ್ಕೆ ಮಾಡಿರುವ ಶಾಲೆಗಳನ್ನು ಹೊರತುಪಡಿಸಿ ಇನ್ನುಳಿದ ಅರ್ಹ ಶಾಲೆಗಳನ್ನು ಆಯ್ಕೆ ಮಾಡಿ ಪರಿಸರ ಇಲಾಖೆಯಿಂದಲೂ ಸಹ ಪರಿಸರ ಮಿತ್ರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು 2020-21ನೇ ಸಾಲಿಗೆ ಪ್ರಸ್ತಾವನೆಯನ್ನು ಸಲ್ಲಿಸಲು ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಅನುಷ್ಠಾನ ಮತ್ತು ಮೇಲುಸ್ತುವಾರಿ ಸಮಿತಿಯ ಅಧ್ಯಕ್ಷರು ಸೂಚಿಸಿದರು.

- **ಅರಣ್ಯ ಇಲಾಖೆಯ ಸಾಮಾಜಿಕ ನರ್ಸರಿಯಿಂದ ಗಿಡಗಳನ್ನು ನೀಡುವ ಬಗ್ಗೆ.**

ಜಿಲ್ಲೆಯಲ್ಲಿರುವ ಸರ್ಕಾರಿ/ಅನುದಾನಿತ/ಅನುದಾನ ರಹಿತ ಪ್ರಾಥಮಿಕ, ಪ್ರೌಢ ಶಾಲೆ ಮತ್ತು ಕಾಲೇಜುಗಳಲ್ಲಿ ಇಕೋ ಕ್ಲಬ್ ಚಟುವಟಿಕೆಗಳನ್ನು ಅನುಷ್ಠಾನಗೊಳಿಸಲು ಅಗತ್ಯವಿರುವ ಗಿಡಗಳನ್ನು ಅರಣ್ಯ ಇಲಾಖೆಯ ಸಾಮಾಜಿಕ ಅರಣ್ಯ ನರ್ಸರಿ ಫಾರಂನಿಂದ ನೀಡುವಂತೆ ಸಭೆಯಲ್ಲಿ ಹಾಜರಿದ್ದ ಉಪ ಅರಣ್ಯ ಸಂರಕ್ಷಣಾಧಿಕಾರಿಯವರಿಗೆ ಮಾನ್ಯ ಜಿಲ್ಲಾಧಿಕಾರಿಗಳು ಸೂಚಿಸಿದರು. ಈ ಸಂಬಂಧ ಎಲ್ಲಾ ಮುಖ್ಯ ಶಿಕ್ಷಕರುಗಳಿಗೆ ಮಾರ್ಗದರ್ಶನ ನೀಡಲಾಗುವುದೆಂದು ಉಪನಿರ್ದೇಶಕರು(ಆಡಳಿತ) ರವರು ಸಭೆಯಲ್ಲಿ ತಿಳಿಸಿದರು.

- **ಔಷದೀಯ ಸಸ್ಯಗಳನ್ನು ಬೆಳೆಸುವ ಬಗ್ಗೆ.**

ಶಾಲಾ ಆವರಣದಲ್ಲಿ ಹೆಚ್ಚಿನ ಸ್ಥಳಾವಕಾಶವಿದ್ದಲ್ಲಿ ಅಂತಹ ಶಾಲೆಗಳಲ್ಲಿ ವಿದ್ಯಾರ್ಥಿಗಳ ಪಠ್ಯ ಚಟುವಟಿಕೆಗಳಿಗೆ ಪೂರಕವಾದ ಹಾಗೂ ಆಯುರ್ವೇದ ಔಷದೀಯ ಗುಣಗಳುಳ್ಳ ಸಸ್ಯಗಳನ್ನು ಬೆಳೆಸಲು ವಿದ್ಯಾರ್ಥಿಗಳು ಮತ್ತು ಶಿಕ್ಷಕರಲ್ಲಿ ಪ್ರೋತ್ಸಾಹಿಸುವಂತೆ ತಿಳಿಸಲಾಯಿತು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಯುಷ್ ಸಹಯೋಗವನ್ನು ನೀಡಲು ಸಭೆಯಲ್ಲಿ ಹಾಜರಿದ್ದ ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಯವರಿಗೆ ಮಾನ್ಯ ಜಿಲ್ಲಾಧಿಕಾರಿಗಳು ತಿಳಿಸಿದರು.

ಪ್ರಸ್ತುತ **"ಚಲುವ ಚಾಮರಾಜನಗರ ಅಭಿಯಾನ"** ಕಾರ್ಯಕ್ರಮವನ್ನು ಚಾಮರಾಜನಗರ ಜಿಲ್ಲಾ ಆಡಳಿತವತಿಯಿಂದ ಹಮ್ಮಿಕೊಳ್ಳಲಾಗಿದ್ದು ಇಕೋ ಕ್ಲಬ್ ಹಾಗೂ ಪರಿಸರ ಮಿತ್ರ ಶಾಲೆಗಳನ್ನು ಈ ಅಭಿಯಾನಕ್ಕೆ ಲಿಂಕ್ ಮಾಡುವಂತೆ ತಿಳಿಸಲಾಯಿತು. ಜಿಲ್ಲೆಯಲ್ಲಿ ಪರಿಸರ ಸಂರಕ್ಷಣೆ ಮಾಡುವುದು, ಪ್ಲಾಸ್ಟಿಕ್ ಬಳಕೆ ನಿಷೇದಿಸುವುದು, ಪರ್ಯಾಯ ವ್ಯವಸ್ಥೆಯಾಗಿ ಹಸಿರು ಪಡೆ ಮತ್ತು ಪರಿಸರ ಮಿತ್ರ ಶಾಲೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ಮಾಡಲು ಸಭೆಯಲ್ಲಿ ಹಾಜರಿದ್ದ ಎಲ್ಲಾ ಸದಸ್ಯರಿಗೆ ತಿಳಿಸಲಾಯಿತು.

ಪೋಷಕರು ಮತ್ತು ಹಳೆಯ ವಿದ್ಯಾರ್ಥಿಗಳಿಂದ ಪ್ರೋತ್ಸಾಹ ಪಡೆಯುವ ಬಗ್ಗೆ ಪ್ರಸ್ತುತ ಇರುವ ಇಕೋ ಕ್ಲಬ್ ಅಥವಾ ಪರಿಸರ ಮಿತ್ರ ಶಾಲೆಗಳಲ್ಲಿ ಓದಿ ವಿಶೇಷ ಸಾಧನೆ ಮಾಡಿರುವ ಅಥವಾ ಉನ್ನತ ಹುದ್ದೆಗಳಲ್ಲಿರುವ ಹೆಣ್ಣು ಮಕ್ಕಳನ್ನು ಗುರ್ತಿಸಿ ಅವರು ಮಾಡಿರುವ ಸಾಧನೆಗಳ ಬಗ್ಗೆ ವಿದ್ಯಾರ್ಥಿಗಳಿಗೆ ಸದರಿ ಸಾಧಕರಿಂದಲೇ ಪ್ರೋತ್ಸಾಹದಾಯಕ ಮಾತುಗಳನ್ನು ಹೇಳಿಸಿ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವಂತೆ ತಿಳಿಸಲಾಯಿತು. ಶಾಲಾ ಆವರಣಗಳಲ್ಲಿ ಹಸಿರುಪಡೆ ಅಥವಾ ಪರಿಸರ ಮಿತ್ರ ಕಾರ್ಯಕ್ರಮಗಳು ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳಲು ಸದರಿ ಗ್ರಾಮಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಳೇ ವಿದ್ಯಾರ್ಥಿಗಳು ಮತ್ತು ಪೋಷಕರ ಸಹಕಾರವನ್ನು ಪಡೆಯುವಂತೆ ತಿಳಿಸಲಾಯಿತು.

- **ಶಾಲಾ ಆವರಣದಲ್ಲಿ ನೀರಿನ ತೊಟ್ಟಿ ನಿರ್ಮಿಸುವ ಬಗ್ಗೆ.**

ಜಿಲ್ಲೆಯ ಎಲ್ಲಾ ಶಾಲೆಗಳ ಪ್ರವೇಶ ದ್ವಾರ/ಸಾರ್ವಜನಿಕವಾಗಿ ಬಳಕೆಯಾಗಲು ಅವಕಾಶವಾಗುವಂತಹ ಕಡೆಗಳಲ್ಲಿ ಪ್ರಾಣಿಗಳು ಮತ್ತು ಪಕ್ಷಿಗಳು ಕುಡಿಯಲು ಅನುಕೂಲವಾಗುವಂತೆ ಸಣ್ಣ ತೊಟ್ಟಿಗಳನ್ನು ಸಮುದಾಯದ ಸಹಕಾರ ಅಥವಾ ಇಲಾಖಾ ಅನುದಾನದಲ್ಲಿ ನಿರ್ಮಿಸಲು ಕ್ರಮವಹಿಸುವಂತೆ ಸುತ್ತೋಲೆಯನ್ನು ನೀಡುವಂತೆ ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಚಾಮರಾಜನಗರರವರಿಗೆ ಮಾನ್ಯ ಜಿಲ್ಲಾಧಿಕಾರಿಗಳು ತಿಳಿಸಿದರು.

- **ಅಕ್ಷರ ದಾಸೋಹ ಕಾರ್ಯಕ್ರಮದ ತ್ಯಾಜ್ಯ ವಸ್ತುಗಳ ಬಳಕೆ ಬಗ್ಗೆ**

ಜಿಲ್ಲೆಯ ಎಲ್ಲಾ ಶಾಲೆಗಳಲ್ಲಿ ಅಕ್ಷರ ದಾಸೋಹ ಕಾರ್ಯಕ್ರಮವು ಅನುಷ್ಠಾನದಲ್ಲಿದ್ದು ಶಾಲಾ ಆವರಣದಲ್ಲಿ ಸ್ಥಳಾವಕಾಶ ಇರುವ ಕಡೆ ಕಿಚನ್ ಗಾರ್ಡನ್ ಮಾಡಿ ಸೊಪ್ಪು, ತರಕಾರಿ ಗಿಡಗಳನ್ನು ಬೆಳೆಸಿ ಮಕ್ಕಳಿಗೆ ತಾಜಾ ಸೊಪ್ಪು ತರಗತಿ ಬಳಸಿ ಪೌಷ್ಠಿಕಾಂಶಗಳು ದೊರೆಯುವಂತೆ ಮಾಡಲು ಶಿಕ್ಷಕರಿಗೆ ಮಾರ್ಗದರ್ಶನ ನೀಡುವಂತೆ ಉಪನಿರ್ದೇಶಕರಿಗೆ ತಿಳಿಸಲಾಯಿತು. ಅಕ್ಷರ ದಾಸೋಹದ ಅನ್ನವನ್ನು ಬಿಸಾಡದೇ ಪೂರ್ಣ ಪ್ರಮಾಣದಲ್ಲಿ ಉಪಯೋಗಿಸುವಂತೆ ವಿದ್ಯಾರ್ಥಿಗಳಿಗೆ ಸೂಚಿಸಲು ತಿಳಿಸಲಾಯಿತು. "ತಿನ್ನಲು ಅನ್ನ ಬಿಸಾಡಲು ಅಲ್ಲ" ಎಂಬ ಘೋಷಣ ವಾಕ್ಯವನ್ನು ಪ್ರತಿ ಶಾಲೆಯಲ್ಲಿಯೂ ಬರೆಯಿಸುವಂತೆ ಮಾನ್ಯ ಜಿಲ್ಲಾಧಿಕಾರಿಗಳು ತಿಳಿಸಿದರು. ಅಕ್ಷರ ದಾಸೋಹದ ತ್ಯಾಜ್ಯ ವಸ್ತುಗಳನ್ನು ಪ್ರತ್ಯೇಕವಾಗಿ ಸಂಗ್ರಹಿಸಿ ಶಾಲಾ ಆವರಣದ ಸ್ವಚ್ಛತೆಯನ್ನು ಕಾಪಾಡುವುದು ಹಾಗೂ ತ್ಯಾಜ್ಯ ವಸ್ತುಗಳನ್ನು ಸಾವಯವ ಗೊಬ್ಬರವನ್ನಾಗಿ ಬಳಕೆ ಮಾಡುವಂತೆ ತಿಳಿಸಲಾಯಿತು.

- **ಶಾಲೆಗಳಲ್ಲಿ ಮಳೆ ನೀರು ಕೊಯ್ಲು ಮಾಡಿಸುವ ಬಗ್ಗೆ.**

ಬೇಸಿಗೆ ಅವಧಿಯಲ್ಲಿ ನೀರಿನ ಅಭಾವ ಬರುವುದರಿಂದ ಸಮರ್ಪಕವಾದ ಕಟ್ಟಡವಿರುವ ಶಾಲೆಗಳು ಮತ್ತು ಕಾಲೇಜುಗಳಲ್ಲಿ ಮಳೆ ನೀರು ಕೊಯ್ಲು ಅಳವಡಿಸಿ ಮಳೆ ನೀರನ್ನು ಸಂಗ್ರಹ ಮಾಡಿ ಬಳಕೆ ಮಾಡಲು ಎಲ್ಲಾ ಮುಖ್ಯ ಶಿಕ್ಷಕರುಗಳಿಗೆ ಮಾರ್ಗದರ್ಶನ ನೀಡಬೇಕೆಂದು ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಚಾಮರಾಜನಗರರವರಿಗೆ ಮಾನ್ಯ ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಹಾಜರಿದ್ದ ಸಮಿತಿಯ ಎಲ್ಲಾ ಸದಸ್ಯರುಗಳಿಗೆ ವಂದನೆಗಳನ್ನು ತಿಳಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಉಪನಿರ್ದೇಶಕರು(ಆಡಳಿತ),
ಸಾರ್ವಜನಿಕ ಶಿಕ್ಷಣ ಇಲಾಖೆ,
ಚಾಮರಾಜನಗರ.

ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು,
ಜಿಲ್ಲಾ ಅನುಷ್ಠಾನ ಮತ್ತು
ಮೇಲುಸ್ತುವಾರಿ ಸಮಿತಿ, ಇಕೋ ಕ್ಲಬ್,
ಚಾಮರಾಜನಗರ.

**ಪ್ರತಿಯನ್ನು :**

1. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ಚಾಮರಾಜನಗರರವರಿಗೆ ಸೂಕ್ತ ಕ್ರಮಕ್ಕಾಗಿ.
2. ಉಪನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಖೆ, ಚಾಮರಾಜನಗರರವರಿಗೆ ಸೂಕ್ತ ಕ್ರಮಕ್ಕಾಗಿ.
3. ಉಪ ಅರಣ್ಯ ಸಂರಕ್ಷಣಾಧಿಕಾರಿಗಳು, ಅರಣ್ಯ ಇಲಾಖೆ, ಚಾಮರಾಜನಗರರವರಿಗೆ ಸೂಕ್ತ ಕ್ರಮಕ್ಕಾಗಿ.
4. ಉಪ ಪರಿಸರ ಅಧಿಕಾರಿ (ಕೆ.ಎಸ್.ಪಿ.ಸಿ.ಬಿ), ಚಾಮರಾಜನಗರರವರಿಗೆ ಸೂಕ್ತ ಕ್ರಮಕ್ಕಾಗಿ.
5. ಶಿಕ್ಷಣಾಧಿಕಾರಿಗಳು, ಮಧ್ಯಾಹ್ನ ಬಿಸಿಯೂಟ ಯೋಜನೆ, ಜಿಲ್ಲಾ ಪಂಚಾಯತ್, ಚಾಮರಾಜನಗರ ರವರಿಗೆ ಸೂಕ್ತ ಕ್ರಮಕ್ಕಾಗಿ.
6. ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಸಮಗ್ರ ಶಿಕ್ಷಣ ಕರ್ನಾಟಕ, ಚಾಮರಾಜನಗರ/ಗುಂಡ್ಲುಪೇಟೆ/ಹನೂರು/ಕೊಳ್ಳೇಗಾಲ/ ಯಳಂದೂರುರವರಿಗೆ ಸೂಕ್ತ ಕ್ರಮಕ್ಕಾಗಿ.
7. ಕಛೇರಿ ಪ್ರತಿ.